Akashvani : Bengaluru
National Bulletin In Kannada
10.10.2025 : 7.35hrs
ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

೧. ದೇಶದ ಡಿಜಿಟಲ್ ಪರಿಸರ ವ್ಯವಸ್ಥೆಯಿಂದ ನಾವೀನ್ಯತೆ, ಸ್ಪರ್ಧೆಗಾಗಿ ಜಾಗತಿಕ ಮಾನದಂಡ ನಿಗದಿ- ಪ್ರಧಾನಿ

೨. ಖಲಿಸ್ತಾನಿ ಉಗ್ರವಾದ ವಿಷಯದ ಕುರಿತು ಪ್ರಧಾನಿ ನರೇಂದ್ರ ಮೋದಿ, ಬ್ರಿಟನ್ ಪ್ರಧಾನಿ ಕೀರ್ ಸ್ಟಾರ್ಮರ್ ಚರ್ಚೆ

೩. ಪ್ರಧಾನಮಂತ್ರಿ ಧನ್-ಧಾನ್ಯ ಯೋಜನೆ, ದ್ವಿದಳ ಧಾನ್ಯಗಳಲ್ಲಿ ಸ್ವಾವಲಂಬನೆ ಯೋಜನೆಗೆ ನಾಳೆ ಚಾಲನೆ

೪. ಟೆಸ್ಟ್ ಕ್ರಿಕೆಟ್: ಎರಡನೇ ಪಂದ್ಯದಲ್ಲಿಂದು ಭಾರತ-ವೆಸ್ಟ್ ಇಂಡೀಸ್ ಮುಖಾಮುಖಿ

><><><><><

ದೇಶದ ಡಿಜಿಟಲ್ ಪರಿಸರ ವ್ಯವಸ್ಥೆಯು, ನಾವೀನ್ಯತೆ ಮತ್ತು ಸ್ಪರ್ಧೆಗಾಗಿ ಜಾಗತಿಕ ಮಾನದಂಡಗಳನ್ನು ನಿಗದಿಪಡಿಸುತ್ತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಮುಂಬೈನಲ್ಲಿ ನಡೆದ ಗ್ಲೋಬಲ್ ಫಿನ್‌ಟೆಕ್ ಫೆಸ್ಟ್- ೨೦೨೫ ಅನ್ನು ಉದ್ದೇಶಿಸಿ ಮಾತನಾಡಿದ ಪ್ರಧಾನಿ, ತಂತ್ರಜ್ಞಾನದ ಪ್ರಜಾಪ್ರಭುತ್ವೀಕರಣದಿಂದಾಗಿ ಭಾರತ, ತಾಂತ್ರಿಕವಾಗಿ ಅಭಿವೃದ್ಧಿ ಹೊಂದುತ್ತಿರುವ ಸಮಾಜಗಳಲ್ಲಿ ಒಂದಾಗಿದೆ ಎಂದರು. ಪ್ರತಿ ತಿಂಗಳು ಯುಪಿಐ ಮೂಲಕ ೨೫ ಲಕ್ಷ ಕೋಟಿ ರೂಪಾಯಿಗಳ ಮೌಲ್ಯದ, ೨೦ ಬಿಲಿಯನ್ ವಹಿವಾಟುಗಳಿಗೆ ದೇಶ ಸಾಕ್ಷಿಯಾಗುತ್ತಿದೆ ಎಂದು ಅವರು ತಿಳಿಸಿದರು.

ಜಾಗತಿಕ ಫಿನ್‌ಟೆಕ್ ಫೆಸ್ಟ್ ಅನ್ನು ಉದ್ದೇಶಿಸಿ ಮಾತನಾಡಿದ ಬ್ರಿಟನ್ ಪ್ರಧಾನಿ ಕೀರ್ ಸ್ಟಾರ್ಮರ್, ಬ್ರಿಟನ್ ಮತ್ತು ಭಾರತ, ಫಿನ್‌ಟೆಕ್‌ನಲ್ಲಿ ಪಾಲುದಾರರು ಮತ್ತು ಜಾಗತಿಕ ನಾಯಕರಾಗಿದ್ದು, ಮುಕ್ತ ವ್ಯಾಪಾರ ಒಪ್ಪಂದವು, ಎರಡೂ ದೇಶಗಳ ಜಿಡಿಪಿಯನ್ನು ಹೆಚ್ಚಿಸುತ್ತದೆ ಎಂದು ಹೇಳಿದರು. ಈ ವರ್ಷ, ಉತ್ತಮ ವರ್ಷವಾಗಿ ಪರಿಣಮಿಸಿದೆ. ಜಾಗತಿಕ ಅನಿಶ್ಚಿತತೆಯ ನಡುವೆ ಭಾರತ-ಬ್ರಿಟನ್ ಸಂಬಂಧಗಳ ಸ್ಥಿರತೆಯನ್ನು ಬಲಪಡಿಸುತ್ತಿದೆ. ಟೆಲಿಕಾಂ, ಕೃತಕ ಬುದ್ಧಿಮತ್ತೆ, ಬಯೋಟೆಕ್, ಕ್ವಾಂಟಮ್, ಸೆಮಿಕಂಡಕ್ಟರ್‌ಗಳು, ಸೈಬರ್ ಮತ್ತು ಬಾಹ್ಯಾಕಾಶದಂತಹ ಕ್ಷೇತ್ರಗಳಲ್ಲಿ ಉಭಯ ದೇಶಗಳ ನಡುವೆ ಸಹಕಾರದ ಹೊಸ ಸಾಧ್ಯತೆಗಳು ಹೊರಹೊಮ್ಮುತ್ತಿವೆ ಎಂದು ಅವರು ತಿಳಿಸಿದರು.

><><><><><

ಮುಂಬೈನಲ್ಲಿ ನಿನ್ನೆ ನಡೆದ ಚರ್ಚೆಯ ಸಂದರ್ಭದಲ್ಲಿ ಪ್ರಧಾನಿ ನರೇಂದ್ರ ಮೋದಿ ಮತ್ತು ಬ್ರಿಟನ್ ಪ್ರಧಾನಿ ಕೀರ್ ಸ್ಟಾರ್ಮರ್, ಖಲಿಸ್ತಾನಿ ಉಗ್ರವಾದ ವಿಷಯದ ಬಗ್ಗೆ ಚರ್ಚಿಸಿದರು. ಸ್ಟಾರ್ಮರ್ ಅವರ ಭಾರತ ಭೇಟಿಯ ಕುರಿತ ವಿಶೇಷ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಸ್ರಿ, ಪ್ರಜಾಪ್ರಭುತ್ವ ಸಮಾಜಗಳಲ್ಲಿ ಮೂಲಭೂತವಾದ ಮತ್ತು ಹಿಂಸಾತ್ಮಕ ಉಗ್ರವಾದಕ್ಕೆ ಜಾಗವಿಲ್ಲ ಎಂದು ಪ್ರಧಾನಿ ಮೋದಿ ಒತ್ತಿ ಹೇಳಿದ್ದಾರೆ. ಬ್ರಿಟನ್‌ನ ಮ್ಯಾಂಚೆಸ್ಟರ್‌ನಲ್ಲಿರುವ ಸಿನಗಾಗ್ ಬಳಿ ಇತ್ತೀಚೆಗೆ ನಡೆದ ದಾಳಿಗೆ ಪ್ರಧಾನಿ ಮೋದಿ ಸಂತಾಪ ಸೂಚಿಸಿದ್ದಾರೆ ಎಂದು ತಿಳಿಸಿದರು. ಪ್ರಧಾನಿ ಮೋದಿ ಮತ್ತು ಪ್ರಧಾನಿ ಸ್ಟಾರ್ಮರ್, ಭಯೋತ್ಪಾದನೆ ಮತ್ತು ಹಿಂಸಾತ್ಮಕ ಉಗ್ರವಾದವನ್ನು ಅದರ ಎಲ್ಲಾ ರೂಪಗಳು ಮತ್ತು

ಅಭಿವ್ಯಕ್ತಿಗಳಲ್ಲಿ ಬಲವಾಗಿ ಖಂಡಿಸಿದರು ಎಂದು ವಿಕ್ರಮ್ ಮಿಸ್ರಿ ಹೇಳಿದರು. ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಯನ್ನು ಇಬ್ಬರೂ ನಾಯಕರು ಖಂಡಿಸಿದರು ಎಂದು ವಿದೇಶಾಂಗ ಕಾರ್ಯದರ್ಶಿ ತಿಳಿಸಿದರು. ಬ್ರಿಟನ್‌ನಲ್ಲಿ ಖಲಿಸ್ತಾನಿ ಉಗ್ರಗಾಮಿಗಳ ಉಪಸ್ಥಿತಿಯ ಬಗ್ಗೆ ಭಾರತ ಈ ಹಿಂದೆಯು ತನ್ನ ಕಳವಳಗಳನ್ನು ಹಂಚಿಕೊಂಡಿದೆ. ಈ ವರ್ಷದ ಆರಂಭದಲ್ಲಿ, ವಿದೇಶಾಂಗ ಸಚಿವ ಎಸ್. ಜೈಶಂಕರ್ ಭಾಗವಹಿಸಿದ್ದ ಲಂಡನ್‌ನ ಚಾಥಮ್ ಹೌಸ್ ಹೊರಗೆ ಖಲಿಸ್ತಾನಿ ಪರ ಹೋರಾಟಗಾರರು ಗದ್ದಲ ಎಬ್ಬಿಸಿದರು.

><><><><

ಬಿಹಾರದಲ್ಲಿ ಮೊದಲ ಹಂತದ ವಿಧಾನಸಭಾ ಚುನಾವಣೆಗೆ ಇಂದು ಅಧಿಸೂಚನೆ ಹೊರಡಿಸಲಾಗುವುದು. ಇದರೊಂದಿಗೆ ಮೊದಲ ಹಂತಕ್ಕೆ ನಾಮಪತ್ರ ಸಲ್ಲಿಕೆ ಆರಂಭವಾಗಲಿದೆ. ೨೪೩ ಸದಸ್ಯ ಬಲದ ಬಿಹಾರ ವಿಧಾನಸಭೆಗೆ ಎರಡು ಹಂತಗಳಲ್ಲಿ ಚುನಾವಣೆ ನಡೆಯಲಿದೆ. ನವೆಂಬರ್ ೬ ರಂದು ೧೨೧ ಸ್ಥಾನಗಳಿಗೆ, ಮೊದಲ ಹಂತದ ಮತದಾನ ನಡೆಯಲಿದೆ. ಈ ತಿಂಗಳ ೧೭ ರಂದು ನಾಮಪತ್ರ ಸಲ್ಲಿಸಲು ಕೊನೆಯ ದಿನವಾಗಿದೆ. ನವೆಂಬರ್ ೧೧ ರಂದು ಎರಡನೇ ಹಂತದಲ್ಲಿ ೧೨೨ ವಿಧಾನಸಭಾ ಕ್ಷೇತ್ರಗಳಿಗೆ ಮತದಾನ ನಡೆಯಲಿದೆ. ಬಿಹಾರ ವಿಧಾನಸಭಾ ಚುನಾವಣೆಯ ಸಮಯದಲ್ಲಿ ಸುಗಮ ಕಾರ್ಯನಿರ್ವಹಣೆಯನ್ನು ಖಚಿತಪಡಿಸಿಕೊಳ್ಳಲು ಸುಮಾರು ಎಂಟು ಲಕ್ಷ ೫೦ ಸಾವಿರ ಅಧಿಕಾರಿಗಳನ್ನು ನಿಯೋಜಿಸಲಾಗಿದೆ. ಸುಮಾರು ನಾಲ್ಕು ಲಕ್ಷ ೫೩ ಸಾವಿರ ಚುನಾವಣಾ ಸಿಬ್ಬಂದಿ, ಎರಡು ಲಕ್ಷ ೫೦ ಸಾವಿರ ಪೊಲೀಸ್ ಅಧಿಕಾರಿಗಳು, ೨೮ ಸಾವಿರಕ್ಕೂ ಹೆಚ್ಚು ಎಣಿಕೆ ಸಿಬ್ಬಂದಿ, ೧೮ ಸಾವಿರ ಸೂಕ್ಷ್ಮ ವೀಕ್ಷಕರನ್ನು ನೇಮಿಸಲಾಗಿದೆ ಎಂದು ಚುನಾವಣಾ ಆಯೋಗ ತಿಳಿಸಿದೆ. ಬಿಹಾರದಲ್ಲಿ ಮೊದಲ ಬಾರಿಗೆ ೨೪೩ ಕ್ಷೇತ್ರಗಳಿಗೆ ತಲಾ ಒಬ್ಬ ಸಾಮಾನ್ಯ ವೀಕ್ಷಕರನ್ನು ನಿಯೋಜಿಸಲಾಗಿದೆ. ಅಲ್ಲದೇ, ೩೮ ಪೊಲೀಸ್ ವೀಕ್ಷಕರು ಮತ್ತು ೬೭ ಖರ್ಚು ವೀಕ್ಷಕರನ್ನು ಸಹ ನಿಯೋಜಿಸಲಾಗಿದೆ. ಈ ವೀಕ್ಷಕರು ಆಯಾ ಕ್ಷೇತ್ರಗಳಲ್ಲಿ, ಯಾವುದೇ ಸಮಸ್ಯೆಗಳನ್ನು ಪರಿಹರಿಸಲು ರಾಜಕೀಯ ಪಕ್ಷಗಳು ಮತ್ತು ಅಭ್ಯರ್ಥಿಗಳೊಂದಿಗೆ ನಿಯಮಿತವಾಗಿ ಸಭೆ ನಡೆಸುತ್ತಾರೆ. ೯೦ ಸಾವಿರದ ೭೧೨ ಬೂತ್ ಮಟ್ಟದ ಅಧಿಕಾರಿಗಳು ಮತ್ತು ೨೪೩ ಚುನಾವಣಾ ನೋಂದಣಿ ಅಧಿಕಾರಿಗಳನ್ನು ಒಳಗೊಂಡ ಚುನಾವಣಾ ಯಂತ್ರೋಪಕರಣಗಳು, ಮತದಾರರಿಗೆ ಫೋನ್ ಕರೆ ಮತ್ತು ಇಸಿಐ ನೆಟ್ ಅಪ್ಲಿಕೇಶನ್‌ನಲ್ಲಿ, ಬುಕ್-ಎ-ಕಾಲ್ ಸೌಲಭ್ಯ ಲಭ್ಯವಿದೆ ಎಂದು ಚುನಾವಣಾ ಆಯೋಗ ತಿಳಿಸಿದೆ.

><><><><

ಪ್ರಧಾನ ಮಂತ್ರಿ ಧನ್-ಧಾನ್ಯ ಯೋಜನೆ ಮತ್ತು ದ್ವಿದಳ ಧಾನ್ಯಗಳಲ್ಲಿ ಸ್ವಾವಲಂಬನೆ ಯೋಜನೆಗಳು ರಾಷ್ಟ್ರವನ್ನು ಆತ್ಮನಿರ್ಭರಗೊಳಿಸುವ ಗುರಿ ಹೊಂದಿರುವ ಉಪಕ್ರಮಗಳಾಗಿವೆ ಎಂದು ಕೃಷಿ ಮತ್ತು ರೈತ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಹೇಳಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಅವರು ನಾಳೆ ನವದೆಹಲಿಯಲ್ಲಿ ಪ್ರಧಾನ ಮಂತ್ರಿ ಧನ್-ಧಾನ್ಯ ಯೋಜನೆ ಮತ್ತು ದ್ವಿದಳ ಧಾನ್ಯಗಳಲ್ಲಿ ಸ್ವಾವಲಂಬನೆ ಯೋಜನೆಗೆ ಚಾಲನೆ ನೀಡಲಿದ್ದಾರೆ. ಈ ಕುರಿತು ಮಾಹಿತಿ ನೀಡಿರುವ ಕೃಷಿ ಸಚಿವರು, ಪ್ರಧಾನ ಮಂತ್ರಿ ಧನ್-ಧಾನ್ಯ ಯೋಜನೆಯಡಿ, ಸರ್ಕಾರ, ೧೦೦ ಕಡಿಮೆ ಉತ್ಪಾದಕ ಜಿಲ್ಲೆಗಳನ್ನು ಗುರುತಿಸಿ, ಉತ್ಪಾದಕತೆಯನ್ನು ಹೆಚ್ಚಿಸಲು ಉದ್ದೇಶಿತ ಕ್ರಮಗಳನ್ನು ಜಾರಿಗೆ ತರಲಿದೆ ಎಂದು ತಿಳಿಸಿದರು. ಈ ಯೋಜನೆಯಡಿ ರೈತರು, ನೀರಾವರಿ ವ್ಯಾಪ್ತಿ ಮತ್ತು ಸಾಲ ಸೌಲಭ್ಯದ ಸುಧಾರಣೆಯಿಂದ ಪ್ರಯೋಜನ ಪಡೆಯುತ್ತಾರೆ. ಕಡಿಮೆ ಕಾರ್ಯಕ್ಷಮತೆಯ ಜಿಲ್ಲೆಗಳ ಉತ್ಪಾದಕತೆಯನ್ನು ಹೆಚ್ಚಿಸುವುದರಿಂದ, ಒಟ್ಟಾರೆ ರಾಷ್ಟ್ರೀಯ ಉತ್ಪಾದನೆ ಏರಿಕೆಯಾಗುತ್ತದೆ. ಜೊತೆಗೆ ರೈತರ ಆದಾಯವೂ ಹೆಚ್ಚಾಗುತ್ತದೆ ಎಂದು ಸಚಿವ ಶಿವರಾಜ್ ಸಿಂಗ್ ಚೌಹಾಣ್ ಹೇಳಿದರು.

><><><><

ಐತಿಹಾಸಿಕ ಗಾಜಾ ಶಾಂತಿ ಒಪ್ಪಂದದ ಯಶಸ್ಸಿಗೆ ಪ್ರಧಾನಿ ನರೇಂದ್ರ ಮೋದಿ ಅವರು ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಮತ್ತು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರನ್ನು ಅಭಿನಂದಿಸಿದ್ದಾರೆ. ನಿನ್ನೆ ರಾತ್ರಿ ನೆತನ್ಯಾಹು ಅವರೊಂದಿಗೆ ನಡೆಸಿದ ದೂರವಾಣಿ ಸಂಭಾಷಣೆಯಲ್ಲಿ, ಪ್ರಧಾನಿ ಮೋದಿ, ಈ ಉಪಕ್ರಮದ ಅಡಿಯಲ್ಲಿ ಸಾಧಿಸಿದ ಪ್ರಗತಿಯನ್ನು ಶ್ಲಾಘಿಸಿದರು. ವಿಶೇಷವಾಗಿ ಒತ್ತೆಯಾಳುಗಳ ಬಿಡುಗಡೆ ಮತ್ತು ಗಾಜಾದ ಜನರಿಗೆ ವರ್ಧಿತ ಮಾನವೀಯ ನೆರವು ನೀಡುವ ಒಪ್ಪಂದವನ್ನು ಸ್ವಾಗತಿಸಿದರು. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಪ್ರಧಾನಿ ಮೋದಿ, ಸ್ನೇಹಿತ ನೆತನ್ಯಾಹು ಅವರೊಂದಿಗಿನ ತಮ್ಮ ಕರೆಯ ವಿವರಗಳನ್ನು ಹಂಚಿಕೊಂಡಿದ್ದಾರೆ. ಭಯೋತ್ಪಾದನೆ ವಿರುದ್ಧ ಭಾರತದ ದೃಢ ನಿಲುವನ್ನು ಪುನರುಚ್ಚರಿಸಿರುವ. ಅವರು ಯಾವುದೇ ರೂಪದಲ್ಲಿ ಅಥವಾ ಅಭಿವ್ಯಕ್ತಿಯಲ್ಲಿ ಭಯೋತ್ಪಾದನೆ ಜಗತ್ತಿನ ಎಲ್ಲಿಯೂ ಸ್ವೀಕಾರಾರ್ಹವಲ್ಲ ಎಂದು ಒತ್ತಿ ಹೇಳಿದರು.

><><><><

ಭಾರತೀಯ ರಿಸರ್ವ್ ಬ್ಯಾಂಕ್-ಆರ್‌ಬಿಐ, ಸಂಜಯ್ ಕುಮಾರ್ ಹನ್ಸ್ಡಾ ಅವರನ್ನು ಕಾರ್ಯನಿರ್ವಾಹಕ ನಿರ್ದೇಶಕರಾಗಿ ನೇಮಿಸಿದೆ. ಹನ್ಸ್ಡಾ ಅವರು, ಆರ್ಥಿಕ ಮತ್ತು ನೀತಿ ಸಂಶೋಧನಾ ವಿಭಾಗದ ಮೇಲ್ವಿಚಾರಣೆ ನಡೆಸಲಿದ್ದಾರೆ. ಅವರು ಬ್ಯಾಂಕಿಂಗ್ ವಲಯ, ಬೆಳವಣಿಗೆ ಮತ್ತು ಹಣದುಬ್ಬರ, ಹಣಕಾಸು ಮತ್ತು ಬಂಡವಾಳ ಮಾರುಕಟ್ಟೆಗಳು, ಕೈಗಾರಿಕೆ ಮತ್ತು ಸೇವೆಗಳು, ರಾಷ್ಟ್ರೀಯ ಮತ್ತು ವಿತ್ತೀಯ ಖಾತೆಗಳು, ನಗದು ಮತ್ತು ಸಾಲ ನಿರ್ವಹಣೆ ಸೇರಿದಂತೆ ಹಲವು ವಲಯಗಳಲ್ಲಿ ಮೂರು ದಶಕಗಳಿಗೂ ಹೆಚ್ಚಿನ ಅನುಭವ ಹೊಂದಿದ್ದಾರೆ. ಈ ಹಿಂದೆ ಅವರು, ಆರ್ಥಿಕ ಮತ್ತು ನೀತಿ ಸಂಶೋಧನಾ ಇಲಾಖೆ, ಹಣಕಾಸು ನೀತಿ ಇಲಾಖೆಯಲ್ಲಿ ಸಲಹೆಗಾರರಾಗಿ ಮತ್ತು ಆಂತರಿಕ ಸಾಲ ನಿರ್ವಹಣಾ ಇಲಾಖೆಯಲ್ಲಿ ನಿರ್ದೇಶಕರಾಗಿ ಸೇವೆ ಸಲ್ಲಿಸಿದ್ದಾರೆ.

><><><><

ಭಾರತ ಮತ್ತು ವೆಸ್ಟ್ ಇಂಡೀಸ್ ನಡುವಿನ ಎರಡನೇ ಮತ್ತು ಅಂತಿಮ ಟೆಸ್ಟ್ ಕ್ರಿಕೆಟ್ ಪಂದ್ಯ ಇಂದು ನವದೆಹಲಿಯ ಅರುಣ್ ಜೇಟ್ಲಿ ಕ್ರೀಡಾಂಗಣದಲ್ಲಿ ನಡೆಯಲಿದೆ. ಪಂದ್ಯ ಬೆಳಗ್ಗೆ ೦೯:೩೦ ಕ್ಕೆ ಆರಂಭವಾಗಲಿದೆ. ಶುಭಮನ್ ಗಿಲ್ ನೇತೃತ್ವದ ಭಾರತ ತಂಡ, ಅಹಮದಾಬಾದ್‌ನಲ್ಲಿ ನಡೆದ ಸರಣಿಯ ಆರಂಭಿಕ ಪಂದ್ಯದಲ್ಲಿ ನಿರ್ಣಾಯಕ ಜಯ ಗಳಿಸಿದ ನಂತರ, ಈ ಪಂದ್ಯವನ್ನೂ ಗೆದ್ದು, ಸರಣಿಯನ್ನು ಕ್ಲೀನ್ ಸ್ವೀಪ್ ಮಾಡಲು ತವಕಿಸುತ್ತಿದೆ.  ಈ ತಿಂಗಳ ಕೊನೆಯಲ್ಲಿ ಆಸ್ಟ್ರೇಲಿಯಾದಲ್ಲಿ ನಡೆಯಲಿರುವ ಏಕದಿನ ಮತ್ತು ಟಿ-೨೦  ಸರಣಿ ಮತ್ತು ಮುಂದಿನ ತಿಂಗಳು ದಕ್ಷಿಣ ಆಫ್ರಿಕಾ ವಿರುದ್ಧದ ಪ್ರಮುಖ ಟೆಸ್ಟ್ ಸರಣಿ ಸೇರಿದಂತೆ, ಮುಂಬರುವ ಪ್ರವಾಸಗಳಿಗೆ ಈ ಪಂದ್ಯ ಒಂದು ನಿರ್ಣಾಯಕ ಹೆಜ್ಜೆಯಾಗಿದೆ.

><><><><

ವಿಶಾಖಪಟ್ಟಣದಲ್ಲಿ ನಿನ್ನೆ ನಡೆದ ಐಸಿಸಿ ಮಹಿಳಾ ಏಕದಿನ ಕ್ರಿಕೆಟ್ ಪಂದ್ಯದಲ್ಲಿ ಭಾರತ ತಂಡದ ವಿರುದ್ಧ ದಕ್ಷಿಣ ಆಫ್ರಿಕಾ  ತಂಡ ಮೂರು ವಿಕೆಟ್‌ಗಳಿಂದ ಗೆಲುವು ಸಾಧಿಸಿದೆ. ಮೊದಲು ಬ್ಯಾಟಿಂಗ್ ಮಾಡಿದ ಭಾರತ, ೪೯.೫ ಓವರ್‌ಗಳಲ್ಲಿ ೨೫೧ ರನ್‌ಗಳಿಗೆ ತನ್ನೆಲ್ಲಾ ವಿಕೆಟ್‌ಗಳನ್ನು ಕಳೆದುಕೊಂಡಿತು. ಗೆಲುವಿನ ಗುರಿ ಬೆನ್ನತ್ತಿದ ದಕ್ಷಿಣ ಆಫ್ರಿಕಾ, ೪೮.೫ ಓವರ್‌ಗಳಿಗೆ ೭ ವಿಕೆಟ್ ನಷ್ಟಕ್ಕೆ ೨೫೨ ರನ್ ಗಳಿಸುವ ಮೂಲಕ ಗೆಲುವಿನ ನಗೆ ಬೀರಿತು. ಗುವಾಹಟಿಯ ಬರ್ಸಾಪರ ಕ್ರಿಕೆಟ್ ಕ್ರೀಡಾಂಗಣದಲ್ಲಿ ಇಂದು ನಡೆಯುವ ಮತ್ತೊಂದು ಪಂದ್ಯದಲ್ಲಿ ನ್ಯೂಜಿಲೆಂಡ್ ಮತ್ತು ಬಾಂಗ್ಲಾದೇಶ ವನಿತಾ ತಂಡಗಳು ಮುಖಾಮುಖಿಯಾಗಲಿವೆ.

><><END><><